ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 2874 ಕ್ಕೆ ಅನುಬಂಧ

ಕ್ರಮ ಸಂಖ್ಯೆ	ತಾಲ್ಲೂಕು	2001-02ನೇ ಸಾಲಿನಲ್ಲಿ ಇದರಾ 6:2001 ರವರೆಗೆ ವೆಚ್ಚ
1)	ಕೋಲಾರ	21.59
2)	ಮಾಲೂರು	9.67
3)	ಬಂಗಾರಪೇಟೆ	1.53
4)	ಶ್ರೀನಿವಾಸಪುರ	21.70
5)	ಮುಳಬಾಗಿಲು	6.20
6)	ಚಿಂತಾಮಣಿ	7.77
7)	ಚಿಕ್ಕಬಳ್ಳಾಪುರ	11.78
8)	ಗೌರಿಬಿದನೂರು	10.42
9)	ಗುಂಡಿಬಂಡೆ	1.52
10)	ಬಾಗೇಪಲ್ಲಿ	2.04
11)	ಶಿಡ್ಲಘಟ್ಟ	13.58
	ಒಟ್ಟು	107.80

ಕೇಂದ್ರ ಸರ್ಕಾರದ ಅಂತ್ಯೋದಯ ಯೋಜನೆ

2433 (3243) ಶ್ರೀ ಶಂಕರಲಿಂಗೇಗೌಡ ಹೆಚ್.ಎಸ್. (ಚಾಮರಾಜ) :— ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಕೇಂದ್ರ ಸರ್ಕಾರದ ಅಂತ್ಯೋದಯ ಅನ್ನ ಯೋಜನೆಗೆ ಸಂಬಂಧಿಸಿದಂತೆ ಮೈಸೂರು ನಗರದಲ್ಲಿ ಫಲಾನುಭವಿಗಳನ್ನು ಗುರುತಿಸಲಾಗಿದೆಯೇ?

ಆ) ಹಾಗಿದ್ದಲ್ಲಿ, ಇದರ ಲಾಭವನ್ನು ಎಷ್ಟು ಮಂದಿ ಪಡೆದುಕೊಳ್ಳುವರು; ಎಂದಿನಿಂದ ಪಡೆದುಕೊಳ್ಳುವರು;

ಇ) ಇಲ್ಲದಿದ್ದಲ್ಲಿ ಫಲಾನುಭವಿಗಳನ್ನು ಗುರುತಿಸಲು ಎಷ್ಟು ಕಾಲ ಬೇಕಾಗುವುದು?

ಶ್ರೀ ಡಿ.ಬಿ. ಇನಾಂದಾರ್ (ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು) :—

ಅ) ಫಲಾನುಭವಿಗಳನ್ನು ಗುರುತಿಸುವ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.

ಆ) ಗುರುತಿಸುವ ಪ್ರಕ್ರಿಯೆ ಮುಗಿದ ನಂತರ ಫಲಾನುಭವಿಗಳ ಸಂಖ್ಯೆ ತಿಳಿಯುವುದು. ಸದರಿ ಪ್ರಕ್ರಿಯೆ ಮುಗಿದ ಕೂಡಲೇ ಈ ಯೋಜನೆಯನ್ನು ಜಾರಿಗೆ ತರಲಾಗುವುದು.

ಇ) ಗ್ರಾಮಾಂತರ ಪ್ರದೇಶಗಳಲ್ಲಿ ಈ ಕಾರ್ಯ ಮುಗಿದಿದ್ದು ಪಟ್ಟಣ ಪ್ರದೇಶಗಳಲ್ಲಿ ಫಲಾನುಭವಿಗಳನ್ನು ನಗರ ಸಭೆಯ ಸಹಯೋಗದೊಂದಿಗೆ ಗುರುತಿಸುವ ಪ್ರಕ್ರಿಯೆ ಪ್ರಗತಿಯಲ್ಲಿದ್ದು ಶೀಘ್ರದಲ್ಲಿಯೇ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು.

ಮೈಸೂರು ಜಿಲ್ಲೆಯಲ್ಲಿನ ಹೊಸ ಕಾರ್ಖಾನೆಗಳಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶ

2434(3245) ಶ್ರೀ ಶಂಕರಲಿಂಗೇಗೌಡ ಹೆಚ್.ಎಸ್. (ಚಾಮರಾಜ) :— ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮೈಸೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಹೊಸ ಕೈಗಾರಿಕೆಗಳು ಹಾಗೂ ಕಾರ್ಖಾನೆಗಳು ಪ್ರಾರಂಭವಾಗುವವೆ; ಅವು ಯಾವುವು. ಹಾಗಿದ್ದಲ್ಲಿ ಎಂದಿನಿಂದ ಪ್ರಾರಂಭವಾಗುವುವು.

ಆ) ಸದರಿ ಕಾರ್ಖಾನೆಗಳಲ್ಲಿ ಸ್ಥಳೀಯರಿಗೆ ಉದ್ಯೋಗ ದೊರಕುವಂತಾಗಲು ಸರ್ಕಾರ ನಿಯಮಗಳನ್ನೇನಾದರೂ ರೂಪಿಸಿದೆಯೇ;

ಇ) ಹೌದಾದಲ್ಲಿ, ಈ ಬಗ್ಗೆ ವಿವರ ನೀಡಲಾಗುವುದೇ;

ಈ) ಇಲ್ಲದಿದ್ದಲ್ಲಿ ಸ್ಥಳೀಯರಿಗೆ ಉದ್ಯೋಗ ದೊರಕುವಂತಾಗಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳುವುದು?

ಶ್ರೀ ಆರ್.ವಿ. ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) :—

ಮೈಸೂರು ಜಿಲ್ಲೆಯಲ್ಲಿ ಈ ಕೆಳಗಿನ ಸಂಸ್ಥೆಗಳು ಕಾರ್ಖಾನೆ ಪ್ರಾರಂಭಿಸಲು ಅನುಮತಿ ಪಡೆದಿವೆ.